6. ವಿತ್ತೀಯ ಕಾರ್ಯಕಲಾಪಗಳು

(2000-2001ನೇ ಸಾಲಿನ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಚರ್ಚೆ ಹಾಗೂ ಉತ್ತರ)

ಬೇಡಿಕೆ ಸಂಖ್ಯೆ: 46 ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್

ಶ್ರೀ ಎಂ.ವೈ.ಘೋರ್ಪಡೆ(ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸವಚಿವರು): ಸನ್ಮಾನ್ಯ ಅಧ್ಯಕ್ಷರೇ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-2001ದಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಗ್ರಾಮೀಣಾಭಿವೃದ್ಧಿ ಮತ್ತುಪಂಚಾಯತ್ ರಾಜ್'' ಇಲಾಖಾ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 1,076,84, 50,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 109,89,00,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ನಾನು ಬಿನ್ನವಿಸಿಕೊಳ್ಳುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಬೇಡಿಕೆ ಸಂಖ್ಯೆ:01 ಕೃಷಿ

ಶ್ರೀ ಟಿ.ಬಿ.ಜಯಚಂದ್ರ (ಕೃಷಿ ಸಚಿವರು): ಮಾನ್ಯ ಅಧ್ಯಕ್ಷರೇ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-2001ದಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಕೃಷಿ ಇಲಾಖಾ ಸೇವೆಗಳಿಗೆ (ಬಯಲು ಸೀಮೆ ಅಭಿವೃದ್ಧಿ ಮಂಡಳಿ ಹೊರತು ಪಡಿಸಿ) ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 335,81,29,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 12,04,35,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಬೇಡಿಕೆ ಸಂಖ್ಯೆ:02 ತೋಟಗಾರಿಕೆ

ಶ್ರೀ ಅಲ್ಲಂ ವೀರಭದ್ರಪ್ಪ (ತೋಟಗಾರಿಕೆ ರಾಜ್ಯ ಸಚಿವರು): ಸನ್ಮಾನ್ಯ ಅಧ್ಯಕ್ಷರೇ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-2001ದಂದು ಕೊನೆಗೊಳ್ಳುವ ಆರ್ಥಿಕ

ವರ್ಷದಲ್ಲಿ ''ತೋಟಗಾರಿಕೆ'' ಇಲಾಖಾ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 123,28,56,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು (ಲೇಖಾನದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಬೇಡಿಕೆ ಸಂಖ್ಯೆ: 03 ಮತ್ತು 53 ಪಶುಸಂಗೋಪನೆ ಮತ್ತು ಸಕ್ಕರೆ

ಶ್ರೀ ಟಿ.ಬಿ.ಜಯಚಂದ್ರ(ಕೃಷಿ ಸಚಿವರು, ಸನ್ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರ ಪರವಾಗಿ):ಸನ್ಮಾನ್ಯ ಅಧ್ಯಕ್ಷರೇ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-2001 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಪಶುಸಂಗೋಪನೆ'' ಇಲಾಖಾ ಸೇವೆಗಳ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 148,64,10,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-2001 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಸಕ್ಕರೆ'' ಇಲಾಖಾ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 31,16,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 201,00,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಬೇಡಿಕೆ ಕ್ರಮಾಂಕ : 04 ಮೀನುಗಾರಿಕೆ, ಬಂದರು ಹಾಗೂ ಪ್ರದೇಶಾಭಿವೃದ್ಧಿ

ಶ್ರೀ ರಮಾನಾಥ ರೈ (ಮೀನುಗಾರಿಕೆ, ಬಂದರು ಹಾಗೂ ಪ್ರದೇಶಾಭಿವೃದ್ಧಿ ಸಚಿವರು): ಸನ್ಮಾನ್ಯ ಅಧ್ಯಕ್ಷರೇ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-2001ದಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಮೀನುಗಾರಿಕೆ, ಬಂದರು ಮತ್ತು ಪ್ರದೇಶಾಭಿವೃದ್ಧಿ'' ಇಲಾಖಾ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 198,44,18,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ

508,00,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು: ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಮಂತ್ರಿಯವರು ಮತ್ತು ವೈದ್ಯಕೀಯ ಶಿಕ್ಷಣ ಮಂತ್ರಿಯವರು ಉಪಸ್ಥಿತರಿಲ್ಲದ ಕಾರಣ ನಾಳೆ ಬೇಡಿಕೆಗಳನ್ನು ಮಂಡಿಸುತ್ತಾರೆ.

ಶ್ರೀ ಜಗದೀಶ್ ಶೆಟ್ಟರ್ (ವಿರೋಧ ಪಕ್ಷದ ನಾಯಕರು): ಮಾನ್ಯ ಅಧ್ಯಕ್ಷರೇ ನಾನು ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್‌ಗಳ ಬಗ್ಗೆ ಅಡ್ಜರ್ನ್‌ಮೆಂಟ್ ಮೋಶನ್ ಮೂವ್ ಮಾಡಲು ಕೇಳಿಕೊಂಡಿದ್ದೆ. ತಾವುಗಳು ಅನುಮತಿ ಕೊಟ್ಟರೆ ಪ್ರಾರಂಭ ಮಾಡುತ್ತೇನೆ. ಇದು ಬಹಳ ಪ್ರಮುಖವಾದ ವಿಷಯ.

ಅಧ್ಯಕ್ಷರು: ಈಗ ಬೇಡ ನಾಳೆ ತೆಗೆದುಕೊಳ್ಳೋಣ. ಸರಕಾರಿ ಕಾರ್ಯಕಲಾಪಗಳು ಕೂಡ ಸ್ವಲ್ಪ ನಡೆಯಬೇಕಲ್ಲವೆ?

ಶ್ರೀ ಜಗದೀಶ್ ಶೆಟ್ಟರ್: ಮಾನ್ಯ ಅಧ್ಯಕ್ಷರೇ, ನಿಯಮ 69 ಪ್ರಕಾರ ಮಾನ್ಯ ಸಿಂಧ್ಯರವರು ಮತ್ತಿತರ ಮಾನ್ಯ ಶಾಸಕರು ಮೂವ್ ಮಾಡಿದ್ದರು. ಈಗಾಗಲೇ ಡಿಸಿಯವರಿಂದ ಪ್ರೊಪೋಸಲ್ಸ್ ಬಂದು ಗೆಜೆಟ್ ನೋಟಿಫಿಕೇಶನ್ ಆಗಿರತಕ್ಕಂಥಾದ್ದು ಮುಂತಾಗಿ ನಡೆಯುವಂಥ ಸಂದರ್ಭದಲ್ಲಿ ಎಲ್ಲಿ ಇಂಥ ವಿಚಾರವು ನಿಷ್ಪಕ್ಷಪಾತವಾಗಿ ಆಗಿಬೇಕಾಗಿತ್ತೋ ಅದು ಆಗಲಾರದೆ ರಾಜಕೀಯ ಮತ್ತಿತರ ಒತ್ತಡದಿಂದ ಮತ್ತು ಹಸ್ತಕ್ಷೇಪದಿಂದಾಗಿ ಒಂದೊಂದು ತಾಲ್ಲೂಕಿನಲ್ಲಿ ನಿರ್ದಿಷ್ಟವಾಗಿ ಇಂಪಾರ್‌ಶಿಯಲ್ ಆಗಿ ಮಾಡಿದ್ದರೆ ಈ ಸಮಸ್ಯೆ ಬರುತ್ತಿರಲಿಲ್ಲ. ಕೆಲವೊಂದು ತಾಲೂಕಿನಲ್ಲಿ 3-4 ರಿಸರ್‌ವೇಶನ್ ಆಗಿದೆ. ಕೆಲವು ಕಡೆ ಇನ್ನೂ ಹೆಚ್ಚು. ಜನರಲ್ ಇಲ್ಲವೇ ಇಲ್ಲ. ಈ ರೀತಿಯಾಗಿ ಅನ್ಯಾಯಗಳು ಪ್ರತಿಯೊಂದು ತಾಲ್ಲೂಕಿನಲ್ಲೂ ಎದ್ದುಕಾಣುತ್ತಿದೆ. ಆದ್ದರಿಂದ ಯಾವ ತಾಲ್ಲೂಕಿನಲ್ಲಿ ಇಂಥ ಅನ್ಯಾಯವಾಗಿದೆ, ಎಲ್ಲಿ ಹಸ್ತಕ್ಷೇಪವಾಗಿದೆ, ಮುಂತಾಗಿ ಇಲ್ಲಿ ಪ್ರಸ್ತಾಪ ಮಾಡಬೇಕಾಗಿದೆ. ಅಲ್ಲಿ ಇದ್ದ ಕ್ಷೇತ್ರದ ಶಾಸಕರು, ರೂಲಿಂಗ್ ಪಾರ್ಟಿ ಶಾಸಕರು ಇರಬಹುದು, ಅಥವಾ ಅಲ್ಲಿ ಕಾರ್ಯಕರ್ತರಿರಬಹುದು. ಇದರ ಬಗ್ಗೆ ಇವತ್ತು ಸರ್ಕಾರದ ಗಮನಕ್ಕೆ ತರುವುದು ಬಹಳ ಅವಶ್ಯಕತೆ ಇದೆ. ಯಾವ ತಪ್ಪು ಕೆಲಸವನ್ನು ಮಾಡುತ್ತಿದ್ದಾರೆ, ಅದರಿಂದ ಏನು ಸಿಗದೆ ಹೋಗುತ್ತಿದೆ, ಈ ಒಂದು ಸಮಾಜದಲ್ಲಿ, ರಾಜಕೀಯ ವ್ಯವಸ್ಥೆಯಲ್ಲಿ ಯಾವ ರೀತಿ ವ್ಯವಸ್ಥೆ ನಿರ್ಮಾಣವಾಗುತ್ತಿದೆ ಎನ್ನುವುದನ್ನು ನೋಡಬೇಕಾಗಿದೆ. ಒಂದು ಕಲುಷಿತ ವಾತಾವರಣ, ಅದರಿಂದ ಹಲವಾರು ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆಯಾಗುವಂಥ ವಾತಾವರಣ, ಇದರ